ಪಡಿತರ ವಿತರಣಾ ಕೇಂದ್ರಗಳು

467(818); ಶ್ರೀ ಬೋಪಯ್ಯ ಕೆ.ಜಿ. (ವಿರಾಜಪೇಟೆ)

ಅ) ಕೊಡಗು ಜಿಲ್ಲೆಯಲ್ಲಿ ಒಟ್ಟು ಎಷ್ಟು ಪಡಿತರ ವಿತರಣಾ ಕೇಂದ್ರಗಳಿವೆ (Fair Price Shop) ತಾಲ್ಲೂಕುವಾರು ವಿವರಗಳನ್ನು ನೀಡುವುದು.

ಆ) ಈ ಕೇಂದ್ರಗಳಲ್ಲಿ ಸರಿಯಾಗಿ ಆಹಾರ ಸಾಮಗ್ರಿ ವಿತರಣೆಯಾಗುತ್ತಿಲ್ಲ ಎಂಬ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮವೇನು:

ಇ) ಜಿಲ್ಲೆಯಲ್ಲಿ 2012–13ರಲ್ಲಿ ಎಷ್ಟು ಹೊಸ ಪಡಿತರ ವಿತರಣಾ ಕೇಂದ್ರಗಳನ್ನು ತೆರೆಯಲಾಗಿದೆ? (ಪೂರ್ಣವಿವರ ನೀಡುವುದು)

ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ಕೊಡಗು ಜಿಲ್ಲೆಯಲ್ಲಿರುವ ಒಟ್ಟು ಪಡಿತರ ವಿತರಣಾ ಕೇಂದ್ರಗಳ ಸಂಖ್ಯೆ 289

ತಾಲ್ಲೂಕು	ಪಡಿತರ ವಿತರಣಾ ಕೇಂದ್ರಗಳು
ಮಡಿಕೇರಿ	66
ವಿರಾಜಪೇಟೆ	103
ಸೋಮವಾರಪೇಟೆ	120
ಒಟ್ಟು	289

ಆ) ಕೊಡಗು ಜಿಲ್ಲೆಯ ಪಡಿತರ ವಿತರಣಾ ಕೇಂದ್ರಗಳಲ್ಲಿ ಆಹಾರ ಸಾಮಗ್ರಿಗಳು ಸಮರ್ಪಕವಾಗಿ ವಿತರಣೆಯಾಗುತ್ತಿವೆ.

ಇ) ಕೊಡಗು ಜಿಲ್ಲೆಯಲ್ಲಿ 2012–13ನೇ ಸಾಲಿನಲ್ಲಿ ಯಾವುದೇ ಹೊಸ ಪಡಿತರ ವಿತರಣಾ ಕೇಂದ್ರವನ್ನು ತೆರೆದಿರುವುದಿಲ್ಲ